# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 18.09.2021 ರ
### ಸಭಾ ನಡುವಳಿ

ದಿನಾಂಕ: 18.09.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ಶ್ರೀ ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 4 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ ವಾರ್ಡ್ ನಂ. 05 |
| 5 | ಆರ್.ಜೆ ಸೋಮಶೇಖರ್ | ವ್ಯವಸ್ಥಾಪಕರು, ಕಂದಾಯ ಶಾಖೆ, ಥಣಿಸಂದ್ರ |
| 6 | ಬಿ. ನಾಗೇಂದ್ರಪ್ಪ | ಎಸ್.ಡಿ.ಎ, ಕಂದಾಯ ಶಾಖೆ, ಥಣಿಸಂದ್ರ |
| 7 | ಶ್ರೀನಿವಾಸಮೂರ್ತಿ ಎಂ. | ವಿದ್ಯುತ್ ಶಾಖೆ, ಬಿಬಿಎಂಪಿ |
| 8 | ಹೆಚ್. ಅನೀಲ್ | ಕಿರಿಯ ಆರೋಗ್ಯ ಪರಿವೀಕ್ಷಕರು |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚೆರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್–19ರ ಸಂಬಂಧ ಮುಜಾಗೃತ ಕ್ರಮಗಳ ಬಗ್ಗೆ.** ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ವೆಂಕಟೇಶ್ ರವರು ಮಾತನಾಡಿ ಕೋವಿಡ್–19ರ ಸೊಂಕು ತಗಲಿ ಮರಣ ಹೊಂದಿರುವ ಕುಟುಂಬದ ಮುಖ್ಯಸ್ಥರಿಗೆ ಬಿ.ಪಿ.ಎಲ್ ಕಾರ್ಡ್ ಹೊಂದಿದ್ದರೆ ರೂ. 1.00 ಲಕ್ಷ ಹಾಘೂ ಎ.ಪಿ.ಎಲ್ ಕಾರ್ಡ್ ಹೊಂದಿದ್ದರೆ 50 ಸಾವಿರ ರೂ ಗಳ ಸಹಾಯಧನವನ್ನು ನೀಡಲಾಗುವುದು ಎಂದು ಸಭೆಗೆ ತಿಳಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿರುವ ಬಡತನ ರೇಖೆಗಿಂತ ಕೆಳಗಿರುವ ಸಾರ್ವಜನಿಕರು ವ್ಯಾಕ್ಸೀನೇಷನ್ ಅನ್ನು ಕಡ್ಡಾಯವಾಗಿ ತೆಗೆದುಕೊಳ್ಳುವಂತೆ ಪ್ರಚಾರ ಮಾಡಿ ವ್ಯಾಕ್ಸೀನೇಷನ್ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಬೇಕೆಂದು ಸಭೆಗೆ ತಿಳಿಸಿದರು.
3. ಶ್ರೀ ಪ್ರಶಾಂತ್, ಸಾರ್ವಜನಿಕರು ಕೋಗಿಲು ರವರು ಮಾತನಾಡಿ ಕೋಗಿಲು ಮುಖ್ಯರಸ್ತೆಯ ಫುಟ್‌ಪಾತ್ ಸರಿಇಲ್ಲದ ಕಾರಣ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಕ್ರಮ ತೆಗೆದುಕೊಳ್ಳುವಂತೆ ಕೋರಿದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ಸದರಿ ರಸ್ತೆಯು ರಸ್ತೆ ಮತ್ತು ಮೂಲಭೂತ



Scanned by CamScanner

ಸೌಕರ್ಯ ವಿಭಾಗಕ್ಕೆ ಸಂಬಂಧಿಸಿರುವುದರಿಂದ ಸದರಿ ವಿಭಾಗದ ಅಭಿಯಂತರರ ಗಮನಕ್ಕೆ ತಂದು ಕ್ರಮ ವಹಿಸಲು ತಿಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.

4. ವಾರ್ಡ್ ವ್ಯಾಪ್ತಿಯ ರಸ್ತೆ ಬದಿಯಲ್ಲಿ ಸಾರ್ವಜನಿಕರು ಅಡ್ಡಾದಿಡ್ಡಿಯಾಗಿ ಬಿಸಾಡಿರುವ ಕಸವನ್ನು ತೆಗೆದು ಸುಂದರೀಕರಿಸಲು ಬೇಕಾದ ಎಲ್ಲಾ ಸಾಮಗ್ರಿಗಳನ್ನು ನೀಡುವಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಲು ಕೋರಿದರು.
5. ಶ್ರೀ ಅನೀಲ್ ರವರು ಮಾತನಾಡಿ ಕಸ ವಿಲೇವಾರಿಗೆ 3 ಆಟೋ ಟಿಪ್ಪರ್‌ಗಳಿದ್ದು ಹೆಚ್ಚುವರಿಯಾಗಿ 2 ಆಟೋ ಟಿಪ್ಪರ್‌ಗಳನ್ನು ನೀಡಿದ್ದಲ್ಲಿ ಕಸ ವಿಲೇವಾರಿಯನ್ನು ನಿಗಧಿತ ಸಮಯದೊಳಗೆ ಕಾರ್ಯನಿರ್ವಹಿಸಬಹುದಾಗಿದ್ದು, ಹೆಚ್ಚುವರಿ ಆಟೋ ಟಿಪ್ಪರ್‌ಗಳನ್ನು ಒದಗಿಸಲು ಕೋರಿದರು.
6. ಸಾರ್ವಜನಿಕರಾದ ಶ್ರೀ ಸವಿತಾ ರಾಜೇಂದ್ರ ಹೆಗಡೆ ರವರು ಮಾತನಾಡಿ ಕೆ.ವಿ ಜಯಾರಾಂ ರಸ್ತೆಯಲ್ಲಿ ಎಂ.ಸಿ.ಸಿ 2ನೇ ಹಂತ, ಜೆ.ಎನ್.ಆರ್.ಸಿ ವೃತ್ತ ಶ್ರೀರಾಂಪುರ ಮುಖ್ಯರಸ್ತೆಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಮ್ಯಾನ್‌ಹೋಲ್‌ಗಳಿಂದ ಕೊಳಚೆ ನೀಡು ತುಂಬ ರಸ್ತೆಗೆ ಹರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ತುಂಬ ತೊಂದರೆಯಾಗುತ್ತಿದ್ದು, ಇದನ್ನು ಕೂಡಲೇ ಸರಿಪಡಿಸಿಕೊಡುವಂತೆ ಸಭೆಗೆ ಕೋರಿದರು. ಈ ಬಗ್ಗೆ ನೋಡೆಲ್ ಅಧಿಕಾರಿಗಳೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಭಿಯಂತರಿಗೆ ದೂರವಾಣಿಯ ಮೂಲಕ ಸಂಪರ್ಕ ಮಾಡಿ ಸಮಸ್ಯೆ ಬಗೆ ಹರಿಸುವಂತೆ ಸೂಚನೆ ನೀಡಿದರು
7. ಟೆಲಿಕಾಂ ಬಡಾವಣೆ ನಿವಾಸಿಯವರು ವಾರ್ಡ್ ನಂ.05ರ ವ್ಯಾಪ್ತಿಯ ಟೆಲಿಕಾಂ ಬಡಾವಣೆ ಎಂ.ಸಿ.ಇ.ಸಿ.ಹೆಚ್.ಎಸ್ ಬಡಾವಣೆಯ ಉದ್ಯಾನವನಗಳಲ್ಲಿ ಅಳವಡಿಸಿರುವ ಮಕ್ಕಳ ಆಟದ ಸಾಮಗ್ರಿಗಳು ಹಾಗೂ ಜಿಮ್ ಸಲಕರಣೆಗಳು ಹಳಾಗಿದ್ದು, ಕೂಡಲೇ ಸರಿಪಡಿಸುವಂತೆ ಕೋರಿದರು
8. ಸಾರ್ವಜನಿಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ತೆರೆದ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ಹೊರಸಾಗಿಸಲು ಕ್ರಮ ವಹಿಸಲು ಕೋರಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್-19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾನುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned by CamScanner